# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 317 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 03/02/2021 |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯ ಮಂತ್ರಿಗಳು, ಲೋಕೋಪಯೋಗಿ ಇಲಾಖೆ. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಲೋಕೋಪಯೋಗಿ ಇಲಾಖೆಯಲ್ಲಿ 50 ಕೋಟಿಗೂ ಹೆಚ್ಚಿನ 771 ಕಾಮಗಾರಿಗಳ ತುಂಡುಗುತ್ತಿಗೆ ಹಗರಣ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಲೋಕೋಪಯೋಗಿ ಇಲಾಖೆಯಲ್ಲಿ ಯಾವುದೇ ಕಾಮಗಾರಿಯನ್ನು ತುಂಡುಗುತ್ತಿಗೆಯಡಿ ನಿರ್ವಹಿಸಿರುವುದಿಲ್ಲ. |
| ಆ) | ಲೋಕೋಪಯೋಗಿ ಇಲಾಖೆಯ ಕೇಂದ್ರ ಕಚೇರಿ ಆವರಣದಲ್ಲೇ ಇರುವ ನಂ. 6ನೇ ಕಟ್ಟಡಗಳ ಉಪ ವಿಭಾಗದಲ್ಲಿ ಒಂದೇ ಕಾಮಗಾರಿಯನ್ನು ವಿಭಜಿಸಿ ಒಂದೇ ಗುತ್ತಿಗೆದಾರರಿಗೆ ತುಂಡು ಗುತ್ತಿಗೆ ನೀಡುವ ಮೂಲಕ ಕೆಪಿಟಿಪಿ ಕಾಯ್ದೆಯ ಉಲ್ಲಂಘಿಸಿ ಅವ್ಯವಹಾರ ನಡೆಸಿ ಭ್ರಷ್ಟಾಚಾರವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಲೋಕೋಪಯೋಗಿ ಇಲಾಖೆಯ ದಕ್ಷಿಣ ವಲಯ ಕಟ್ಟಡಗಳ ವೃತ್ತದ ವ್ಯಾಪ್ತಿಗೆ ಒಳಪಡುವ ನಂ.6 ಕಟ್ಟಡಗಳ ಉಪ ವಿಭಾಗದ ವ್ಯಾಪ್ತಿಯಲ್ಲಿ ಕಾಮಗಾರಿಯನ್ನು ವಿಭಜಿಸಿರುವುದಿಲ್ಲ ಹಾಗೂ ತುಂಡುಗುತ್ತಿಗೆ ನೀಡಿರುವುದಿಲ್ಲ. ಹಂಚಿಕೆ ಮಾಡಿದ ಅನುದಾನಕ್ಕನುಗುಣವಾಗಿ ವಸತಿಗೃಹಗಳ, ನ್ಯಾಯಾಲಯ ಮತ್ತು ಇಲಾಖಾ ಕಟ್ಟಡಗಳ ಅಗತ್ಯ ನಿರ್ವಹಣೆಗೆ ಆದ್ಯತೆ ಅನುಸಾರ ಮಾನ್ಯ ನ್ಯಾಯಾಧೀಶರುಗಳ ಹಾಗೂ ಇಲಾಖಾ ಮುಖ್ಯಸ್ಥರ ಕೋರಿಕೆಯನ್ವಯ ಅವಶ್ಯ ಕಾಮಗಾರಿಗಳನ್ನು ಕರ್ನಾಟಕ ಲೋಕೋಪಯೋಗಿ ನೀತಿ ಸಂಹಿತೆ ಹಾಗೂ ಕೆ.ಟಿ.ಪಿ.ಪಿ ಕಾಯ್ದೆ ಪ್ರಕಾರ ಟೆಂಡರ್ ಮುಖೇನ ಎಲ್ಲಾ ಕಾಮಗಾರಿಗಳನ್ನು ನಿರ್ವಹಿಸಲಾಗುತ್ತಿದೆ. |
| ಇ) | ತುಂಡುಗುತ್ತಿಗೆ ಮಾಡಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? | |

ಸಂಖ್ಯೆ: ಲೋಇ 06 ಬಿಎಲ್ ಕ್ಯೂ 2021

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯ ಮಂತ್ರಿಗಳು,
ಲೋಕೋಪಯೋಗಿ ಇಲಾಖೆ.